ಸೇರಿದ ಕಟ್ಟಡಗಳ ನಿರ್ವಹಣೆ ಮತ್ತು ಅಭಿವೃದ್ಧಿಗೋಸ್ಕರ ರೂ. 40.00 ಲಕ್ಷಗಳನ್ನು ನಿರ್ದೇಶಕರ ಪಿ.ಡಿ. ಖಾತೆಯಲ್ಲಿ ಇರಿಸಲಾಗಿದೆ.

ಮಲೆಬೆನ್ನೂರು ಸರ್ಕಾರಿ ಆಸ್ಪತ್ರೆಯ ಬಗ್ಗೆ.

434 - ಶ್ರೀ ಹೆಚ್. ಶಿವಪ್ಪ (ಹರಿಹರ) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಹರಿಹರ ತಾಲ್ಲೂಕಿನ ಮಲೆಬೆನ್ನೂರಿನ 50 ಹಾಸಿಗೆಗಳ ಆಸ್ಪತ್ರೆಯನ್ನು ಮೇಲ್ದರ್ಜೆಗೇರಿಸುವ ಬಗ್ಗೆ ಸರ್ಕಾರದವರು ಕೈಗೊಂಡಿರುವ ಕ್ರಮಗಳೇನು?

ಆ) ಇದನ್ನು ಎಷ್ಟು ಅವಧಿಯೊಳಗೆ ಮೇಲ್ದರ್ಜೆಗೇರಿಸಲಾಗುವುದು?

ಶ್ರೀ ಡಾ. ಹೆಚ್.ಸಿ. ಮಹದೇವಪ್ಪ : (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :

ಅ) ಮಲೆಬೆನ್ನೂರಿನಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರ ಇರುತ್ತದೆ. 50 ಹಾಸಿಗೆಗಳ ಆಸ್ಪತ್ರೆ ಮಂಜೂರಾಗಿರುವುದಿಲ್ಲ. ಆದುದರಿಂದ ಅದನ್ನು ಇನ್ನೂ ಮೇಲ್ದರ್ಜೆಗೇರಿಸುವ ಪ್ರಶ್ನೆ ಇರುವುದಿಲ್ಲ.

ಆ) ಉದ್ಭವಿಸುವುದಿಲ್ಲ.

ಶಿಗ್ಗಾಂವ ಹಾಗೂ ಸವಣೂರು ತಾಲ್ಲೂಕು ಪಿ.ಹೆಚ್.ಸಿ.ಗೆ ವೈದ್ಯಾಧಿಕಾರಿಗಳ ನೇಮಕಾತಿ.

435 - ಶ್ರೀ ಮಂಜುನಾಥ .ಸಿ. ಕನ್ನೂರ (ಶಿಗ್ಗಾಂವ) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಸವಣೂರು ತಾಲ್ಲೂಕು ಎಲೂಗಿ ಪಿ.ಹೆಚ್.ಸಿ.ಯಲ್ಲಿ ಕೆಲಸ ಮಾಡುತ್ತಿರುವ ವೈದ್ಯಾಧಿಕಾರಿಯವರ ಬಗ್ಗೆ ಸಾರ್ವಜನಿಕರಿಂದ ದೂರುಗಳು ಬಂದಿವೆಯೇ ಹಾಗಿದ್ದಲ್ಲಿ ಸರ್ಕಾರದವರು ತೆಗೆದುಕೊಂಡ ಕ್ರಮಗಳೇನು?

ಆ) ಶಿಗ್ಗಾಂವ ತಾಲ್ಲೂಕು ಕೇಂದ್ರ ಸ್ಥಳದಲ್ಲಿ ಪಿ.ಹೆಚ್.ಸಿ.ಯನ್ನು ಸಮುದಾಯ ಆರೋಗ್ಯ ಕೇಂದ್ರವನ್ನಾಗಿ ಪರಿವರ್ತಿಸಿ, ಆದಕ್ಕೆ ಅನುಗುಣವಾಗಿ ವೈದ್ಯಾಧಿಕಾರಿಗಳನ್ನು ನೇಮಕ ಮಾಡಲಾಗಿದೆಯೇ?

ಇ) ಹಾಗಿಲ್ಲದಿದ್ದಲ್ಲಿ, ವೈದ್ಯಾಧಿಕಾರಿಗಳನ್ನು ಎಂದು ಭರ್ತಿ ಮಾಡಲಾಗುವವುದು.

ಈ) ಶಿಗ್ಗಾಂವ ತಾಲ್ಲೂಕು ಬಂಕಾಪುರ ಪಿ.ಹೆಚ್.ಸಿ.ಯನ್ನು ಸಿ.ಹೆಚ್.ಸಿಯನ್ನಾಗಿ ಎಂದು ಪರಿವರ್ತಿಸಲಾಯಿತು. ಈ ಬಗ್ಗೆ ಸಮುದಾಯ ಆರೋಗ್ಯ ಕೇಂದ್ರಕ್ಕೆ ಬೇಕಾಗುವ ಸಿಬ್ಬಂದಿಯನ್ನು ಎಂದು ಭರ್ತಿ ಮಾಡಲಾಗುವುದು.

ಡಾ: ಹೆಚ್.ಸಿ. ಮಹದೇವಪ್ಪ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :

ಅ) ಬಂದಿದೆ. ಈ ಬಗ್ಗೆ ಇಲಾಖಾ ವಿಚಾರಣೆ ನಡೆಸಲಾಗುತ್ತಿದೆ.

ಆ) ಸಮುದಾಯ ಆರೋಗ್ಯ ಕೇಂದ್ರವನ್ನಾಗಿ ಪರಿವರ್ತಿಸಲಾಗಿದೆ. ವೈದ್ಯಾಧಿಕಾರಿಗಳನ್ನು ನೇಮಕ ಮಾಡಲಾಗುವುದು.

ಇ) ಶೀಘ್ರದಲ್ಲಿಯೇ ಭರ್ತಿ ಮಾಡಲಾಗುವುದು.

ಈ) ಸರ್ಕಾರಿ ಆದೇಶ ಸಂಖ್ಯೆಯ ದಿನಾಂಕ: 28-12-93ರಲ್ಲಿ ಸಮುದಾಯ ಆರೋಗ್ಯ ಕೇಂದ್ರವನ್ನಾಗಿ ಪರಿವರ್ತಿಸಲಾಗಿದೆ. ಮಂಜೂರಾಗಿರುವ ಹೆಚ್ಚುವರಿ ಹುದ್ದೆಗಳನ್ನು ಶೀಘ್ರದಲ್ಲಿಯೇ ಭರ್ತಿ ಮಾಡಲಾಗುವುದು.

ಕಮಲಾಪುರ ಕ್ಷೇತ್ರದ ಕಾಲೇಜುಗಳು.

436 - ಶ್ರೀ ರೇವುನಾಯಕ್ ಬೆಳಮಗಿ (ಕಮಲಾಪುರ) : ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕಮಲಾಪುರ ಮತಕ್ಷೇತ್ರದಲ್ಲಿ ಬರುವ ಕಾಲೇಜುಗಳೇಷ್ಟು? (ಪಿ.ಯು.ಸಿ. ಹಾಗೂ ಪದವಿ ಕಾಲೇಜುಗಳನ್ನು ಪ್ರತ್ಯೇಕ ವಿವರ ಒದಗಿಸುವುದು).

ಆ) ಈ ಎಲ್ಲಾ ಕಾಲೇಜುಗಳಿಗೂ ಸಾಕಷ್ಟು ಶಿಕ್ಷಕ ಸಿಬ್ಬಂದಿ ಇದೆಯೇ ಹಾಗಿಲ್ಲದಿದ್ದಲ್ಲಿ ಕೊರತೆ ಇರುವ ಸ್ಥಳಗಳಾವುವು ಸದರಿ ಹುದ್ದೆಗಳನ್ನು ಭರ್ತಿ ಮಾಡಲು ಕೈಗೊಂಡ ಕ್ರಮಗಳೇನು?

ಇ) ಸ್ವಂತ ಕಟ್ಟಡ ಇರುವ ಹಾಗೂ ಇಲ್ಲದೆ ಇರುವ ಸರ್ಕಾರಿ ಕಾಲೇಜುಗಳ ಸಂಖ್ಯೆ ಎಷ್ಟು ನಿರ್ಮಿಸಲು ಯೋಜನೆಯೇನಾದರೂ ಸರ್ಕಾರದ ಮುಂದೆ ಇದೆಯೇ ಹಾಗಿದ್ದಲ್ಲಿ, ಯಾವಾಗ ನಿರ್ಮಿಸಲಾಗುವುದು?

ಶ್ರೀ ಡಿ. ಮಂಜುನಾಥ (ಉನ್ನತ ಶಿಕ್ಷಣ ಸಚಿವರು) :

ಅ) 1) ಕಾಲೇಜು ಶಿಕ್ಷಣ ನಿರ್ದೇಶನಾಲಯದ ಅಧೀನದಲ್ಲಿ ಬರುವ ಪದವಿ ಕಾಲೇಜುಗಳು

ಒಂದು

2) ಪದವಿ ಪೂರ್ವ ಶಿಕ್ಷಣ ನಿರ್ದೇಶನಾಲಯದ ಅಧೀನದಲ್ಲಿ ಬರುವ ಪದವಿ ಪೂರ್ವ ಕಾಲೇಜುಗಳು

07 ಪದವಿ ಪೂರ್ವ ಕಾಲೇಜುಗಳು ಈ ಕೆಳಕಂಡಲ್ಲಿರುತ್ತವೆ.

1) ಕಮಲಾಪುರ, 2) ನರೋಣಾ, 3) ಖಜೂರಿ, 4) ಚಿಂಚನಸೂರ, 5) ವಿ.ಕೆ. ಸಲಗರ 6) ಮುನ್ನಳ್ಳಿ, 7) ಮಹಾಗಾಂವ.

ಆ) ಕಾಲೇಜು ಶಿಕ್ಷಣ ನಿರ್ದೇಶನಾಲಯದ ಹತೋಟಿಯಲ್ಲಿ ಬರುವ ಪದವಿ ಕಾಲೇಜಿಗೆ ಸಂಬಂಧಿಸಿದಂತೆ